KARNATAKA SUCCESS NO 1
Kannada Daily

ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.

Volume: 02 Issue-37
ಭಾನುವಾರ 01 ಡಿಸೆಂಬರ್ 2024

Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ–ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

## ಸಿದ್ದಗಂಗಾ ಶ್ರೀಗಳಿಗೆ ಆಹ್ವಾನ



ತುಮಕೂರು: ನಗರದ ಜ್ಯೂನಿಯರ್ ಕಾಲೇಜು ಮೈದಾನದಲ್ಲಿ ಡಿಸೆಂಬರ್ 2ರಂದು ಮುಖ್ಯಮಂತ್ರಿಗಳಿಂದ ವಿವಿಧ ಕಾಮಗಾರಿಗಳ ಶಂಕುಸ್ಥಪನೆ/ಉದ್ಘಾಟನೆ ಮತ್ತು ಸವಲತ್ತು ವಿತರಣಾ ಕಾರ್ಯಕ್ರಮಕ್ಕೆ ಆಗಮಿಸುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಶುಕ್ರವಾರ ಮಠಕ್ಕೆ ಭೇಟಿ ನೀಡಿ ಶ್ರೀ ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಸ್ವಾಮೀಜಿಗಳಿಗೆ ಆಹ್ವಾನ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು, ಮಹಾನಗರ ಪಾಲಿಕೆ ಆಯುಕ್ತೆ ಬಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್ ಸೇರಿದಂತೆ ಮತ್ತಿತರರು ಹಾಜರಿದ್ದರು.



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತುಮಕೂರು ಜಿಲ್ಲಾ ಘಟಕದ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಎನ್.ನರಸಿಂಹರಾಜು ಅವರು ರಾಜ್ಯದ ಸಹಕಾರ ಸಚಿವ ಕೆ. ಎನ್. ರಾಜಣ್ಣ ಅವರನ್ನು ಭೇಟಿ ಮಾಡಿ ಅಭಿನಂದಿಸಿ ಆಶೀರ್ವಾದ ಪಡೆದರು. ತಾಲ್ಲೂಕು ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ತಾಲೂಕು ಜೆಡಿಎಸ್ ಅಧ್ಯಕ್ಷ ಜಗದೀಶ್ ನಾಗರಾಜಯ್ಯ ಆರೋಪ

## 'ಕುಣಿಗಲ್ ಶಾಸಕರಿಂದ ಜನಪ್ರತಿನಿಧಿಗಳ ಕಡೆಗಣನೆ; ಅಧಿಕಾರ ದುರ್ಬಳಕೆ'

ಕುಣಿಗಲ್ : ಶಾಸಕರು ಚುನಾಯಿತ ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಲೋಕಸಭಾ ಸದಸ್ಯರನ್ನು ಕಡೆಗಣಿಸಿ ಅಧಿಕಾರ ದುರ್ಬಳಿಕೆ ಮಾಡಿಕೊಂಡು ಸರ್ವಾಧಿಕಾರಿ ಆಡಳಿತ ನಡೆಸುತ್ತಿದ್ದಾರೆ ಎಂದು ತಾಲೂಕು ಜೆಡಿಎಸ್ ಪಕ್ಷದ ಅಧ್ಯಕ್ಷ ಜಗದೀಶ್ ನಾಗರಾಜಯ್ಯ ಆರೋಪಿಸಿದರು.

ತಾಲೂಕು ಜೆಡಿಎಸ್ ಪಕ್ಷದ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ತಾಲೂಕಿನಲ್ಲಿ ಶಾಸಕರ ವರ್ತನೆ ಆಡಳಿತ ನಡೆಯು ಸರ್ವಾಧಿಕಾರಿ ಧೋರಣೆಯಿಂದ ಕೂಡಿದೆ ಚುನಾಯಿತ ಗ್ರಾಮ ಪಂಚಾಯಿತಿ ಅಧ್ಯಕ್ಷರು ಲೋಕಸಭಾ ಸದಸ್ಯರನ್ನು ಕಡೆಗಣಿಸುತ್ತಾ ಸರ್ಕಾರಿ ಸಭೆಗಳನ್ನು ನಡೆಸುತ್ತಿರುವುದು ಏಕಪಕ್ಷೀಯ ತೀರ್ಮಾನವಾಗಿದ್ದು ಯಾವುದೇ ಚುನಾಯಿತ ಪ್ರತಿನಿಧಿಗಳಿಗೆ ಅವಕಾಶ ವಿಲ್ಲದಂತಾಗಿದೆ ಎಂದು ದೂರಿದರು.

ಶಾಸಕರು ಚುನಾವಣಾ ಸಂದರ್ಭದಲ್ಲಿ ಮತದಾರರಿಗೆ ತವಾ, ವಸ್ತುಗಳು ಹಣ ಸೀರೆ



ಹಾಗು ಪ್ರವಾಸಕ್ಕೆ ಕಳಿಸಿ ಮತದಾರರಿಗೆ ಅಮೀಷ ಒಡ್ಡಿ ಗೆಲುವು ಸಾಧಿಸಿ ಸರ್ವಾಧಿಕಾರ ಆಡಳಿತ ನೀಡಲು ಮುಂದಾಗಿದ್ದಾರೆ ಎಂದರು. ತಾಲೂಕಿನ ಸರ್ಕಾರಿ ಜನಸ್ಪಂದನ ಕಾರ್ಯಕ್ರಮಕ್ಕೆಜನಪ್ರತಿನಿಧಿಗಳನ್ನು ಕಡೆಗಣಿಸುತ್ತ ಅಧಿಕಾರಿಗಳು ಶಾಸಕರ ಗುಲಾಮರಂತೆ ಕೆಲಸ ಮಾಡುತ್ತಿದ್ದಾರೆ ಈ ಭಾಗದ ಲೋಕಸಭಾ ಸದಸ್ಯ ಸಿ.ಎನ್. ಮಂಜುನಾಥ್ ಲೋಕಸಭಾ ಅಧಿವೇಶನ ನಡೆಯುವ ಸಂದರ್ಭದಲ್ಲಿಯೇ ಕೆ ಡಿ ಪಿ ಹಾಗೂ ಜನಸ್ಪಂದನ ಕಾರ್ಯಕ್ರಮ ನಡೆಸುವ ಔಚಿತ್ಯವೇನಿತ್ತು ಸರ್ಕಾರಿ ನೌಕರ ಸರ್ಕಾರಿ ಹಣ ಪಡೆಯುವ ಸೇವಕನಾಗಿದ್ದು ಜನಪ್ರತಿನಿಧಿಗಳನ್ನು ಸಮಾನ ರೀತಿಯಲ್ಲಿ ಕಾಣಬೇಕಾಗಿದೆ ಈ ಬಗ್ಗೆ ಮುಖ್ಯಕಾರ್ಯ ದರ್ಶಿಗೆ ದೂರು ಸಲ್ಲಿಸಲಾಗುವುದು ಎಂದರು.

ರಾಷ್ಟ್ರೀಯ ಹೆದ್ದಾರಿ ಅಂಚೆಪಾಳ್ಯ ಪಾಳ್ಯದಿಂದ ಯಡಿಯೂರುವರೆಗೂ ಅವೈಜ್ಞಾನಿಕವಾಗಿದ್ದು ಪ್ರತಿವರ್ಷವೂ 598 ಜನರು ಮರಣಹೊಂದುತ್ತಿದ್ದು 2580ಕ್ಕೂ ಹೆಚ್ಚು ಗಾಯಗೊಂಡಿದ್ದಾರೆ 1,400 ಮಂದಿ ಶಾಶ್ವತ ಅಂಗವಿಕಲರಾಗಿದ್ದಾರೆ ಈ ರಸ್ತೆಯಲ್ಲಿ ಹೆಚ್ಚಾಗಿ ಅಪಘಾತಗಳು ನಡೆಯುತ್ತಿರುವ ಸ್ಥಳಗಳನ್ನು ಗುರುತಿಸಿದ್ದು ಲೋಕಸಭಾ ಸದಸ್ಯರಾದ ಮಂಜುನಾಥ್ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ ಮೇರೆಗೆ ಅಂಚೆಪಾಳ್ಯ ಮತ್ತು ಸಿಂಗೋನಹಳ್ಳಿ ಅಗ್ರಹಾರ ಬಳಿ ನಿರ್ಮಿಸಲು ಹೊರಟಂತ ಅಂಡರ್ ಪಾಸ್ ಕೆಲಸವನ್ನು ತಡೆದು ಆ ಭಾಗದ ಜನರಿಗೆ ತೊಂದರೆ ಉಂಟು ಮಾಡಿರುತ್ತಾರೆ ಶಾಸಕರ ಹಿಂಬಾಲಕರ ಅನುಕೂಲಕ್ಕಾಗಿ ಶಾಸಕರು ಪತ್ರ ಬರೆದು ಕೆಲಸವನ್ನು ತಡೆ ಹಿಡಿದಿದ್ದಾರೆ. ಅಧಿಕಾರಿಗಳು ಸರ್ಕಾರಿ ಕಾರ್ಯಕ್ರಮಕ್ಕೆ ಚುನಾಯಿತ ಜನಪ್ರತಿನಿಧಿಗಳನ್ನು ಕಡೆಗಣಿಸಿದರೆ ಮುಂದಿನ ದಿನದಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಈ ಸಂದರ್ಭದಲ್ಲಿ ಮಾಜಿ ಪುರಸಭಾ ಅಧ್ಯಕ್ಷ ಕೆ.ಎಲ್.ಹರೀಶ್,ಪ್ರೆಸ್ ರಂಗಸ್ವಾಮಿ,ಮಾಜಿ ಪುರಸಭಾ ಸದಸ್ಯ ಜಗದೀಶ್, ಜೆಡಿಎಸ್ ವಕ್ತಾರ ತರೀಕೆರೆ ಪ್ರಕಾಶ್, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎಡೆಯೂರು ದೀಪು,ಹೊನ್ನೇಗೌಡ ಸೇರಿದಂತೆ ಪಂಚಾಯಿತಿ ಅಧ್ಯಕ್ಷರು ಸದಸ್ಯರು ಉಪಸ್ಥಿತರಿದ್ದರು.

## 'ದಸರಾ ಉತ್ಸವದ ಆಹ್ವಾನಿತ ಕಲಾವಿದರಿಗೆ ಸಂಭಾವನೆ ನೀಡಿ'

ತುಮಕೂರು ಜಿಲ್ಲಾ 2024ನೇ ದಸರಾ ಕಾರ್ಯಕ್ರಮದಲ್ಲಿ ಇಲಾಖೆಯ ಆಹ್ವಾನದ ಮೇರೆಗೆ ಕಾರ್ಯಕ್ರಮ ನೀಡಿರುವ ಕಲಾವಿದರುಗಳು ಹಾಗೂ ಕಲಾತಂಡಗಳು, ಮೆರವಣಿಗೆಯಲ್ಲಿ ಭಾಗವಹಿಸಿದ್ದ ಕಲಾತಂಡಗಳು ಹಾಗೂ ಇನ್ನಿತರ ಕಲಾವಿದರುಗಳು ಕಾರ್ಯಕ್ರಮ ಮುಗಿದು ತಿಂಗಳು ಕಳೆದರೂ ತುಮಕೂರು ಜಿಲ್ಲಾ ಸ್ಥಳೀಯ ಕಲಾವಿದರುಗಳಿಗೆ ಆಹ್ವಾನ ನೀಡಿದ್ದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದಾಗಲೀ ಅಥವಾ ಜಿಲ್ಲಾಡಳಿತದಿಂದಾಗಲೀ ಯಾವು ದೇ ರೀತಿಯ ಸಂಭಾವನೆಯನ್ನು ಇದುವರೆಗೂ ನೀಡದಿರುವುದು ಶೋಚನೀಯ ಸಂಗತಿಯಾಗಿದೆ. ಈ ವಿಚಾರವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಕೇಳಿದರೆ ಜಿಲ್ಲಾಡಳಿತದ ಮೇಲೆ, ಜಿಲ್ಲಾಡಳಿತವು ಸಂಬಂಧಪಟ್ಟ ಇಲಾಖಾ ಅಧಿಕಾರಿಗಳ ಮೇಲೆ ನೆಪ ಹೇಳುತ್ತಾ ಕಲಾವಿದರನ್ನು ಅಲೆದಾಡಿಸುತ್ತಿದ್ದಾರೆ. ಆದರೆ ದಸರಾ ಕಾರ್ಯಕ್ರಮದಲ್ಲಿ ಹೊರಗಿನಿಂದ ಬಂದ ಕಲಾವಿದರುಗಳಿಗೆ ರಾಜ ಮರ್ಯಾದೆ ಮತ್ತು ರಾಜೌತಣವನ್ನು ನೀಡಿ 10–20 ಲಕ್ಷ ಹಣವನ್ನು ನೀಡಿರುತ್ತಾರೆ. ಕಾರ್ಯಕ್ರಮ ನೀಡಿರುವ ತಂಡದ ಮುಖ್ಯಸ್ಥರು 10–20 ಜನ ಕಲಾವಿದರನ್ನು ಕರೆತಂದು ಊಟ ತಿಂಡಿಯಿಲ್ಲದೆ, ಕುಡಿಯಲಿಕ್ಕೆ ನೀರನ್ನೂ ನೀಡದೇ ಇದ್ದರೂ ಸಹ ಕಲಾದವಿದರುಗಳು ಯಶಸ್ವಿಯಾಗಿ ಕಾರ್ಯಕ್ರಮ ನಡೆಸಿ ಜಿಲ್ಲಾಡಳಿತದ ಮತ್ತು ಇಲಾಖೆಯ ಗೌರವವನ್ನು ಉಳಿಸಿದರೂ ಅವರಿಗೆ ನೀಡಬೇಕಾದ ನಿಗದಿತ ಸಂಭಾವನೆಯನ್ನು ಇದುವರೆಗೆ ನೀಡದೆ ಸತಾಯಿಸುತ್ತಿರುವುದರಿಂದ ದಸರಾ ಕಾರ್ಯಕ್ರಮದಲ್ಲಿ ಭಾಗವಹಿಸಿ ದಂತ ಎಲ್ಲ ಕಲಾವಿದರುಗಳು ದಿನಾಂಕ 03–12–2024ನೇ ಮಂಗಳವಾರ ಬೆಳಿಗ್ಗೆ 9.30ಕ್ಕೆ ಸರಿಯಾಗಿ ನಗರದ ಡಾ. ಗುಬ್ಬಿವೀರಣ್ಣ ಕಲಾಕ್ಷೇತ್ರದ ಆವರಣದಲ್ಲಿ ಸೇರಿ ಜಿಲ್ಲಾಧಿಕಾರಿಗಳ ಕಛೇರಿವರೆಗೆ ಮೌನ ಮೆರವಣಿಗೆ ಮಾಡಿ ನಮಗೆ ಬರಬೇಕಾದ ಸಂಭಾವನೆಯನ್ನು ನೀಡುವಂತೆ ಜಿಲ್ಲಾಧಿಕಾರಿಗಳ ಮೇಲೆ ಒತ್ತಡ ಹೇರಲು ಎಲ್ಲಾ ಕಲಾವಿದರುಗಳು ತಪ್ಪದೇ ಸಮಯಕ್ಕೆ ಸರಿಯಾಗಿ ಆಗಮಿಸಬೇಕೆಂದು ಕರ್ನಾಟಕ ರಾಜ್ಯ ಸಾಂಸ್ಕೃತಿಕ ಸಂಘಟನೆಗಳ ಜಿಲ್ಲಾ ಗೌರವಾಧ್ಯಕ್ಷರು, ಹಾಗೂ ನೊಂದ ಕಲಾವಿದರ ಬಳಗದ ಅಧ್ಯಕ್ಷರಾದ ಕಲಾಶ್ರೀ ನರಸಿಂಹದಾಸ್‌ರವರು ಕರೆ ನೀಡಿದ್ದಾರೆ.

### ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯಾಧ್ಯಕ್ಷ ಎಚ್.ಎಂ. ರೇವಣ್ಣ

## ಕಾಂಗ್ರೆಸ್ ಸರ್ಕಾರದ ಪಂಚ 'ಗ್ಯಾರಂಟಿ'ಯಿಂದ ಜನಸಾಮಾನ್ಯರ ಅಭ್ಯುದಯ

ಚಿಕ್ಕನಾಯಕನಹಳ್ಳಿ : ಗ್ಯಾರಂಟಿ ಯೋಜನೆಗಳು ಹಿಂದಿನ ಕಾಂಗ್ರೆಸ್ ಸರ್ಕಾರಗಳ ಮುಂದುವರೆದ ಜನಸಾಮಾನ್ಯರ ಅಭ್ಯುದಯದ ಜನಪ್ರಿಯ ಯೋಜನೆಯಾಗಿದೆ ಎಂದು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯಾಧ್ಯಕ್ಷ ಎಚ್.ಎಂ. ರೇವಣ್ಣ ತಿಳಿಸಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಅವರು ಮಾತನಾಡಿ ಶ್ರೀಮತಿ ಇಂದಿರಾ ಗಾಂಧಿಯವರ ಗರೀಬಿ ಹಟಾವೋ ಯೋಜನೆಗಳಡಿ 20 ಅಂಶಗಳ ಕಾರ್ಯಕ್ರಮವನ್ನು ದೇಶಾದ್ಯಂತ ಅನುಷ್ಠಾನಗೊಳಿಸಿದ ಇತಿಹಾಸ ಎಲ್ಲಾ ಕಾಂಗ್ರೆಸ್ ಆಡಳಿತದ ರಾಜ್ಯಗಳಲ್ಲಿ ನಡೆದಿದೆ. ದೇವರಾಜ ಅರಸ್ ಆಡಳಿತದಲ್ಲಿ ಉಳುವವನೆ ಭೂಮಿಯ ಒಡೆಯ ನೀತಿ ಜಾರಿ, ಉಚಿತ ಹಾಸ್ಟಲ್‌ಗಳ ಆರಂಭ, ಗುಂಡೂರಾಯರ ಆಡಳಿತದಲ್ಲಿ ಲಕ್ಷಾಂತರ ಯುವಕರಿಗೆ ಉದ್ಯೋಗ ನೀಡಿ ಸ್ಟೈಪಂಡರಿಯಡಿ ಅವರನ್ನು ಖಾಯಂಗೊಳಿಸಿದರು ಎಂದರು.

ಗೃಹಲಕ್ಷ್ಮಿ ಯೋಜನೆಯಲ್ಲಿ 1.22 ಕೋಟಿ ಪಲಾನುಭವಿಗಳಿದ್ದು 32665 ಕೋ.ರೂ. ನೀಡಲಾಗಿದೆ. ಗೃಹ ಜ್ಯೋತಿಯಡಿ 1.61 ಕೋಟಿ ಫಲಾನುಭವಿಗಳಿಗೆ 11031 ಕೋ.ರೂ. ಖರ್ಚಾಗಿದೆ. ಅನ್ನಭಾಗ್ಯ ದಡಿ 51,47 ಪಡಿತರದಾರರ ಕುಟುಂಬಗಳ ಖಾತೆಗೆ 9104 ಕೋ, ರೂ. ಜಮಾ ಆಗಿದೆ. ಇದರಿಂದ 5 ಕೆಜಿಯ ಅಕ್ಕಿಯ ಹಣ ಅವರಿಗೆ ಸಾಕಾಗುತ್ತಿದ್ದು ಶೇ.18ರಷ್ಟು ಮಹಿಳಾ ಸಬಲೀಕರಣವಾಗಿ, ನಮ್ಮ ರಾಜ್ಯದ ಜಿಡಿಪಿ ರಾಷ್ಟ್ರದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ ಎಂದರು.

ಶಕ್ತಿಯೋಜನೆಯಲ್ಲಿ 33655 ಕೋಟಿಜನ ಪ್ರಯಣಿಸಿ ಇದಕ್ಕೆ ಸಂಬಂದಿಸಿದ 8142 ಕೋಟಿರೂ. ಹಣ ಸಂಬಂಧಿಸಿದ ಇಲಾಖೆಗಳಿಗೆ ಜಮಾವಾಗಿದೆ ಇದರಿಂದ ರಾಜ್ಯದ ಅನೇಕ ಧಾರ್ಮಿಕ ಸ್ಥಳವೂ ಸೇರಿದಂತೆ ಪ್ರವಾಸಿ ಸ್ಥಾನಗಳ ಆದಾಯ ಏರಿಕೆಯ ಜೊತೆಗೆ ಲಕ್ಷಾಂತರ ಸಣ್ಣಪುಟ್ಟ ವ್ಯಾಪಾರಿಗಳ ಆರ್ಥಿಕತೆ ಏರಿಕೆ ಕಂಡಿದೆ, ಎಲ್ಲಾ ಯೋಜನಗಳಿಂದ ಪ್ರತಿ ಕುಟುಂಬ ತಿಂಗಳಿಗೆ ರೂ.5 ಸಾವಿರ ಗಳಿಸುತ್ತಿದೆ, ಈ ಎಲ್ಲಾ ಯೋಜನೆಗಳನ್ನು ಹೊರತುಪಡಿಸಿ ರಾಜ್ಯದ ಅಭಿವೃದ್ದಿಗೆ 52 ಸಾವಿರ ಕೋಟಿ ರೂ. ನೀಡಲಾಗಿದೆ ಎಂದರು.

ಮೋದಿ ಹೇಳಿದಂತೆ ಪ್ರತಿಯೊಂದು ಖಾತೆಗೆ ರೂ.15ಲಕ್ಷ ಬರಲಿಲ್ಲ ಆದರೆ ನಾವು ಕೊಟ್ಟ 165 ಭರವಸೆಗಳಲ್ಲಿ 158ನ್ನು ಈಡೇರಿಸಿದ್ದೇವೆ, ರಾಹುಲ್ ಗಾಂಧಿಯವರ ಭಾರತ್ ಜೋಡೋ ಯಾತ್ರೆಯಿಂದ ದೇಶದ ಸಾಮಾನ್ಯವರ್ಗದ ಆಶೋತ್ತರೆಗಳಿಗೆ ಕಾಂಗ್ರೆಸ್ ಧ್ವನಿಯಾಗಿದೆ ಎಂದರು.

ಈ ಸಂದರ್ಭದಲ್ಲಿ ಮಹಿಳಾ ಆಯೋಗದ ಅಧ್ಯಕ್ಷ ಡಾ. ನಾಗಲಕ್ಷ್ಮಿ ಚೌದರಿ, ಚಿಂತಕ ನಿಕೇತ್ರಾಜ್‌ಮೌರ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ. ಚಂದ್ರಶೇಖರ್ ಹಾಗೂ ಪಿ.ಟಿ. ಚಿಕ್ಕಣ್ಣ ಇದ್ದರು.

## ತುಮಕೂರು ಕವಿಗೆ ಸಂಗಮಸಿರಿ ರಾಜ್ಯ ಪ್ರಶಸ್ತಿ



ಹುಬ್ಬಳ್ಳಿ: ನಾಡಿನ ಹಿರಿಯ ಸಾಹಿತಿ ಡಾ ಸಂಗಮೇಶ ಹಂಡಿಗಿ ಅವರ ನೆನಪಿನಲ್ಲಿರುವ ಡಾ.ಸಂಗಮೇಶ ಹಂಡಿಗಿ ಸಾಹಿತ್ಯ ಪ್ರತಿಷ್ಠಾನದಿಂದ ನೀಡುವ "ಸಂಗಮ ಸಿರಿ" ಮೂರನೇ ರಾಜ್ಯ ಪ್ರಶಸ್ತಿಯು ಈ ಬಾರಿ ಕಾವ್ಯ ಕ್ಷೇತ್ರದಲ್ಲಿನ ಸಾಧಕರಿಗೆ ನೀಡಲಾಗುತ್ತಿದ್ದು, ತುಮಕೂರು ಜಿಲ್ಲೆಯ ತಿಪಟೂರು ತಾಲೂಕಿನ ಶಿವರ ಗ್ರಾಮದ ಡಾ .ಎಸ್ .ಕೆ. ಮಂಜುನಾಥ ಅವರಿಗೆ ಸಂದಿದೆ.

'ಗಾಳಿಯ ಎದೆ ಸೀಳಿ ಹೊರಟ ಹಕ್ಕಿ' ಎಂಬ ಕೃತಿಗೆ ಪ್ರಶಸ್ತಿ ನೀಡಲಾಗಿದೆ.ಪ್ರಶಸ್ತಿಯು 10 ಸಾವಿರ ರೂ. ಹಾಗೂ ಲಕವನ್ನು ಒಳಗೊಂಡಿದ್ದು ಡಿ.8 ರಂದು ಹುಬ್ಬಳ್ಳಿಯಲ್ಲಿ ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಟ್ರಸ್ಟ್ ಅಧ್ಯಕ್ಷ ಜಿ.ಬಿ.ಗೌಡಪ್ಪಗೊಳ, ಗೌರವಾಧ್ಯಕ್ಷ ಗಣಪತಿ ಗಂಗೊಳ್ಳಿ ತಿಳಿಸಿದ್ದಾರೆ.ಕವಿ ಮಹಾಂತಪ್ಪ ನಂದೂರ ಅವರ ನೇತೃತ್ವದ ಸಾಹಿತ್ಯ ಸಮಿತಿ ಈ ಆಯ್ಕೆಯನ್ನು ಮಾಡಿದೆ ಎಂದು ಕಾರ್ಯಕ್ರಮ ಸಂಯೋಜಕ ಡಾ.ಪ್ರಭು ಗಂಜಿಹಾಳ ತಿಳಿಸಿದ್ದಾರೆ. ಸಂಗಮ ಸಿರಿ ಮೊದಲ ಎರಡು ಪ್ರಶಸ್ತಿಯು ವಚನ ಸಾಹಿತ್ಯ ಕ್ಷೇತ್ರದಲ್ಲಿ ಡಾ.ವೀರಣ್ಣ ದಂಡೆ ದಂಪತಿ ಹಾಗೂ ಸಿದ್ದನಗೌಡ ಬಿಜ್ಜೂರ ಅವರಿಗೆ ನೀಡಲಾಗಿತ್ತು ಎಂದು ಪ್ರಕಟಣೆ ತಿಳಿಸಿದೆ.

## 'ಕೇಂದ್ರದ ಯೋಜನೆ, ಗಣಿ ಹಣದಲ್ಲಿ ಸರ್ಕಾರಿ ಸಮಾವೇಶ': ಸುರೇಶ್‌ಗೌಡ ಕಿಡಿ

ತುಮಕೂರು: ಡಿಸೆಂಬರ್ 2ರಂದು ನಗರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕೇಂದ್ರ ಸರ್ಕಾರ, ಹಿಂದಿನ ಬಿಜೆಪಿ ಸರ್ಕಾರದ ಯೋಜನೆಗಳು ಹಾಗೂ ಗಣಿಗಾರಿಕೆಯ ಅಭಿವೃದ್ಧಿಯ ಅನುದಾನದ ಯೋಜನೆಗಳಿಗೆ ಶಂಕುಸ್ಥಾಪನೆ, ಉದ್ಘಾಟನೆ ನೆರವೇರಿಸುತ್ತಿದ್ದಾರೆ. ಇದರಲ್ಲಿ ಕಾಂಗ್ರೆಸ್ ಸರ್ಕಾರದ ಕೊಡುಗೆ ಇಲ್ಲ. ಅಧಿಕಾರದ ಕೊನೆಯ ದಿನಗಳನ್ನು ಎಣಿಸುತ್ತಿರುವ ಸಿದ್ದರಾಮಯ್ಯನವರು ಅಸ್ತಿತ್ವ ಉಳಿಸಿಕೊಳ್ಳಲು ನಡೆಸುತ್ತಿರುವ ಬೋಗಸ್ ಕಾರ್ಯಕ್ರಮ ಇದು ಎಂದು ತುಮಕೂರು ಗ್ರಾಮಾಂತರ ಕ್ಷೇತ್ರದ ಶಾಸಕ ಬಿ.ಸುರೇಶ್‌ಗೌಡ ಟೀಕಿಸಿದರು.

ಶನಿವಾರ ನಗರದಲ್ಲಿ ಬಿಜೆಪಿ, ಜೆಡಿಎಸ್ ನಾಯಕರ ನೇತೃತ್ವದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಕಾರ್ಯಕ್ರಮಕ್ಕೆ ತಮಗೂ ಆಹ್ವಾನ ಬಂದಿದೆ. ಸುಮಾರು 1259 ಕೋಟಿ ರೂ.ಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿಗಳು ಶಂಕುಸ್ಥಾಪನೆ, ಉದ್ಘಾಟನೆ ನೆರವೇರಿಸುವರು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಆದರೆ ಇದರಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ನೀಡಿರುವ ಅನುದಾನ ಎಷ್ಟಿದೆ? ದಿವಾಳಿಯಾಗಿ ಜನರ ಟೀಕೆಗೆ ಗುರಿಯಾಗಿರುವ ಕಾಂಗ್ರೆಸ್



ಸರ್ಕಾರವು ಕೇಂದ್ರ ಸರ್ಕಾರ, ಹಿಂದಿನ ಬೀಜೆಪಿ ಸರ್ಕಾರದ ಯೋಜನೆಗಳಿಗೆ ಚಾಲನೆ ನೀಡಿ ತಮ್ಮ ಸಾಧನೆ ಎಂದು ಬಿಂಬಿಸಿಕೊಳ್ಳಲು ಹೊರಟಿದೆ ಎಂದರು.

ಡಿಸೆಂಬರ್ 2ರಂದು ಮುಖ್ಯಮಂತ್ರಿಗಳು ಚಾಲನೆ ನೀಡುತ್ತಿರುವ ಕಾರ್ಯಕ್ರಮಗಳಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ 253 ಕೋಟಿ ರೂ.ಗಳ ಯೋಜನೆ ಕೇಂದ್ರ ಸರ್ಕಾರದ ಅಮೃತ್ ಯೋಜನೆ, ಜೊತೆಗೆ ಗಣಿಗಾರಿಕೆಯ ಅಭಿವೃದ್ಧಿ ಅನುದಾನದಲ್ಲಿ ರಸ್ತೆ, ಶಾಲೆ, ಅಂಗನವಾಡಿ ಕಟ್ಟಡ ನಿರ್ಮಾಣ ಕಾಮಗಾರಿ, ಕೇಂದ್ರ ಸರ್ಕಾರದ ಜಲಜೀವನ್ ಮಿಷನ್ ಯೋಜನೆಯಡಿ ಗುಬ್ಬಿ, ಕೊರಟಗೆರೆ, ಕುಣಿಗಲ್, ಮಧುಗಿರಿ, ಶಿರಾ, ತಿಪಟೂರು, ತುಮಕೂರು ಮತ್ತು ತುರುವೇಕೆರೆ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಶಂಕುಸ್ಥಾಪನೆ ಮಾಡುತ್ತಿದ್ದಾರೆ, ಗಣಿಗಾರಿಕೆ ಹಣದಲ್ಲಿ ಲೋಕೋಪಯೋಗಿ ಇಲಾಖೆ ಮೂಲಕ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ, ಉದ್ಘಾಟನೆ ನೆರವೇರಿಸುತ್ತಿದ್ದಾರೆ. ಇದರಲ್ಲಿ ರಾಜ್ಯ ಸರ್ಕಾರದ ಕೊಡುಗೆ ಇಲ್ಲ ಎಂದು ಸುರೇಶ್‌ಗೌಡ ಹೇಳಿದರು.


ವಿಪಕ್ಷಗಳ ಶಾಸಕರ ಕ್ಷೇತ್ರಗಳಿಗೆ ಅನುದಾನ ನೀಡದೆ ತಾರತಮ್ಯ ಮಾಡುತ್ತಿದ್ದಾರೆ. ಮುಖ್ಯಮಂತ್ರಿಗಳ ಕಾರ್ಯಕ್ರಮವನ್ನು ಜಿಲ್ಲೆಯ ಬಿಜೆಪಿ, ಜೆಡಿಎಸ್ ಶಾಸಕರು ತಿರಸ್ಕರಿಸುತ್ತೇವೆ. ಮುಖ್ಯಮಂತ್ರಿಗಳ ವಿರುದ್ಧ ಕ್ಷೇತ್ರದ ಜನರೊಂದಿಗೆ ಸೇರಿ ಪ್ರತಿಭಟನೆ ನಡೆಸುವುದಾಗಿ ಸುರೇಶ್‌ಗೌಡರು ಹೇಳಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಹೆಬ್ಬಾಕ ರವಿಶಂಕರ್ ಮಾತನಾಡಿ, ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಹಳ್ಳಿಗಳಿಂದ ಜನರನ್ನು ಕರೆತರಲು ಗ್ರಾಮಪಂಚಾಯ್ತಿ ಅಧಿಕಾರಿಗಳಿಗೆ ಹೊಣೆ ಹೊರಿಸಿದ್ದಾರೆ. 750 ಬಸ್‌ಗಳ ಮೂಲಕ ಜನರನ್ನು ಕರೆತರಲು ಅದರ ವೆಚ್ಚವನ್ನು 15ನೇ ಹಣಕಾಸು ಆಯೋಗ ಮತ್ತು ರಾಜ್ಯ ಹಣಕಾಸು ಆಯೋಗದ ಅನುದಾನ ಹೊರತುಪಡಿಸಿ ಆಯಾ ಗ್ರಾಮ ಪಂಚಾಯಿತಿಗಳಲ್ಲಿ ಲಭ್ಯವಿರುವ ಸ್ವಂತ ಸಂಪನ್ಮೂಲದಿಂದ ನಿಯಮಾನುಸಾರ ಭರಿಸಲು ಅನುಮೋದನೆ ನೀಡಿದೆ ಎಂದು ಸರ್ಕಾರ ಸುತ್ತೋಲೆ ಹೊರಡಿಸಿದೆ ಎಂದರು.

ಗ್ರಾಮಸ್ವರ ತೆರಿಗೆ ಹಣ ಗ್ರಾಮದ ಅಭಿವೃದ್ಧಿಗೆ ಬಳಕೆಯಾಗಬೇಕು. ಪ್ರಸ್ತುತ ಗ್ರಾಮ ಪಂಚಾಯ್ತಿಗಳು ಆರ್ಥಿಕ ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಸರ್ಕಾರದ ಈ ಕ್ರಮ ಮತ್ತಷ್ಟು ಹೊರೆ ಮಾಡಿದೆ ಎಂದು ಹೇಳಿದರು.

ಜಿಲ್ಲಾ ಜೆಡಿಎಸ್ ಅಧ್ಯಕ್ಷ ಆರ್.ಸಿ.ಆಂಜನಪ್ಪ, ಕಾರ್ಯಾಧ್ಯಕ್ಷ ಟಿ.ಆರ್.ನಾಗರಾಜು, ಗುಬ್ಬಿ ಬಿಜೆಪಿ ಮುಖಂಡ ದಿಲೀಪ್‌ಕುಮಾರ್, ಜೆಡಿಎಸ್ ಮುಖಂಡ ಗುಬ್ಬಿ ನಾಗರಾಜು, ಜಿಲ್ಲಾ ಬಿಜೆಪಿ ಮಾಧ್ಯಮ ಪ್ರಮುಖ್ ಜೆ.ಜಗದೀಶ್ ಪತ್ರಿಕಾಗೋಷ್ಠಿಯಲ್ಲಿದ್ದರು.

## ಸರ್ಕಾರಿ ಇಂಜನಿಯರ್ಸ್ ಸಂಘಕ್ಕೆ ರಾಧಾಕೃಷ್ಣ ಜಿ.ಎನ್. ಅಧ್ಯಕ್ಷ




ತುಮಕೂರು: ರಾಜ್ಯ ಸರ್ಕಾರಿ ಇಂಜಿನಿಯರ್ಸ್ ಸಂಘ ಕರ್ನಾಟಕ ಇಂಜಿನಿಯರಿಂಗ್ ಸರ್ವೀಸ್ ಅಸೋಸಿಯೇಷನ್ ನ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಜಿ.ಎನ್.ರಾಧಾಕೃಷ್ಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕೇಂದ್ರ ಸಂಘದ ಅಧ್ಯಕ್ಷ ಪೀತಾಂಬರ ಸ್ವಾಮಿಯವರ ಅಧ್ಯಕ್ಷತೆಯಲ್ಲಿ ನಡೆದ ಸರ್ವಸದಸ್ಯರ ಸಭೆಯಲ್ಲಿ ಪದಾಧಿಕಾರಿಗಳ ಆಯ್ಕೆ ನಡೆಯಿತು. ಜಿಲ್ಲಾ ಘಟಕದ ಗೌರವಾಧ್ಯಕ್ಷರಾಗಿ ಹೊನ್ನೇಶಪ್ಪ, ಉಪಾಧ್ಯಕ್ಷರಾಗಿ ಯೋಗೀಶ್, ಕಾರ್ಯದರ್ಶಿಯಾಗಿ ರಮೇಶ್, ಜಂಟಿ ಕಾರ್ಯದರ್ಶಿಯಾಗಿ ಪ್ರಕಾಶ್, ಖಜಾಂಚಿಯಾಗಿ ದಯಾನಂದ್ ಹಾಗೂ ಜೆಎಸಿ ಸಂಚಾಲಕರಾಗಿ ಸಿದ್ದಪ್ಪ ಅವರು ಆಯ್ಕೆಯಾಗಿದ್ದಾರೆ. ನೀರಾವರಿ ಇಲಾಖೆಯ ಯೋಜನಾ ಘಟಕದ ಪದಾಧಿಕಾರಿಗಳಾಗಿ ಗುರುಪ್ರಸಾದ್ (ಅಧ್ಯಕ್ಷ), ತನುಜ(ಉಪಾಧ್ಯಕ್ಷೆ), ವಿಜಯಪ್ರಸಾದ್ (ಕಾರ್ಯದರ್ಶಿ), ಸಂತೋಷ್ (ಜಂಟಿ ಕಾರ್ಯದರ್ಶಿ), ಸರ್ಪಭೂಷಣ್(ಖಜಾಂಚಿ) ಹಾಗೂ ಸೌಮ್ಯ ( ಜೆಎಸಿ ಸಂಚಾಲಕಿ) ರವರುಗಳು ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.

## ಯುವಜನರ ಸಬಲೀಕರಣಕ್ಕೆ ಸರ್ಕಾರದಿಂದ ಹಲವು ಯೋಜನೆ: ಡಾ.ತಿಪ್ಪೇಸ್ವಾಮಿ

ತುಮಕೂರು: ದೇಶದಲ್ಲಿ 18 ರಿಂದ 40 ವರ್ಷ ವಯಸ್ಸಿನ ಶೇ40ರಷ್ಟು ಯುವಜನರಿದ್ದು, ಇವರ ಸಬಲೀಕರಣಕ್ಕಾಗಿ ಕೇಂದ್ರದಲ್ಲಿ ನೆಹರು ಯುವಕೇಂದ್ರ, ರಾಜ್ಯದಲ್ಲಿ ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿದ್ದು, ಯುವಜನರು ಇವುಗಳ ಸದುಪಯೋಗ ಪಡೆದುಕೊಂಡು ಒಳ್ಳೆಯ ನಾಯಕರಾಗಿ ಹೊರಹೊಮ್ಮುವಂತೆ ಮಕ್ಕಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ತಿಳಿಸಿದ್ದಾರೆ.

ನಗರದ ರೈಲ್ವೆ ನಿಲ್ದಾಣ ರಸ್ತೆಯಲ್ಲಿರುವ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ,ನೆಹರು ಯುವಕೇಂದ್ರ ಸೇರಿದಂತೆ




ಹಲವು ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 2024–25ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ದಲ್ಲಿ ಪಾಲ್ಗೊಂಡು ಮಾತನಾಡುತಿದ್ದ ಅವರು, ಅಂಕಗಳಿಕೆಯಲ್ಲಿ ತಲ್ಲೀನರಾಗಿ ರುವ ಯುವಜನರು ತಮಗಾಗಿ ದುಡಿಯುತ್ತಿರುವ ಸಂಸ್ಥೆಗಳ ಕಡೆಗೆ ತಿರುಗಿ ನೋಡದಂತಹ ಸ್ಥಿತಿಯಲ್ಲಿರುವುದು ವಿಪರ್ಯಾಸ ಎಂದರು.

ಕೌಶಲ್ಯಾಭಿವೃದ್ದಿ ಮಂಡಳಿ ಮಾಜಿ ಅಧ್ಯಕ್ಷ ಮುರುಳೀಧರ ಹಾಲಪ್ಪ ಮಾತನಾಡಿ, ನಮ್ಮ ಗ್ರಾಮೀಣ ಮಕ್ಕಳಲ್ಲಿ ಪ್ರತಿಭೆ ಮತ್ತು ಧೈರ್ಯ ಎರಡು ಇದೆ.ಆದರೆ ಅದಕ್ಕೆ ಸರಿಯಾದ ಮಾರ್ಗದರ್ಶನ ಅಗತ್ಯವಿದೆ.ಈ ಮಾರ್ಗ ದರ್ಶನ ದೊರೆಯುವುದು ಕ್ರೀಡಾ ಮತ್ತು ಯುವ ಸಬಲೀಕರಣ ಹಾಗೂ ನೆಹರು ಯುವ ಕೇಂದ್ರದಿಂದ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ವಸಂತ ಮಾತನಾಡಿ, ಯುವಶಕ್ತಿಯನ್ನು ಉದ್ದೀಪನಗೊಳಿಸುವ ಇಂತಹ ಕಾರ್ಯಕ್ರಮಗಳನ್ನು ಹೆಚ್ಚು ಹೆಚ್ಚಾಗಿ ನಮ್ಮ ಕಾಲೇಜಿನಲ್ಲಿ ಆಯೋಜಿಸಲಾಗುತ್ತಿದೆ. ಮೊಬೈಲ್ ಬಳಕೆ, ಅದರಲ್ಲಿಯೂ ಸೋಷಿಯಲ್ ಮೀಡಿಯಾ ಬಳಕೆಯ ಬಗ್ಗೆ ಮೂಗು ಮುರಿಯುವುದು ಸಹಜ.ಆದರೆ ನಮ್ಮ ಯುವಜನತೆ ಸಾಮಾಜಿಕ ಜಾಲತಾಣವನ್ನು ಸಮರ್ಪಕವಾಗಿ ಬಳಸಿಕೊಳ್ಳುವಲ್ಲಿ ವಿಫಲವಾಗಿವೆ. ಬೇಡದ್ದರ ಕಡೆಗೆ ಗಮನಹರಿಸುವ ಬದಲು, ನಮ್ಮ ಓದಿಗೆ, ಜೀವನ ರೂಪಿಸಿಕೊಳ್ಳಲು ಪೂರಕವಾದ ಕಾರ್ಯಕ್ರಮಗಳತ್ತ ಗಮನಹರಿಸಬೇಕೆಂದರು.

ಕ್ರೀಡೆ ಮತ್ತು ಯುವಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕ ರೋಹಿತ್ ಗಂಗಾಧರ್ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ವೇದಿಕೆಯಲ್ಲಿ ನೆಹರು ಯುವ ಕೇಂದ್ರದ ಸಮನ್ವಯಾಧಿಕಾರಿ ಸುಹಾಸ್,ರಾಜ್ಯ ಯುವ ಪ್ರಶಸ್ತಿ ಪುರಸ್ಕೃತರಾದ ರವೀಂದ್ರ, ವಿಜಯಲಕ್ಷ್ಮಿ, ಹೇಮಲತ,ರಾಕ್‌ಲೈನ್ ರವಿ,ತೀರ್ಪುಗಾರರಾದ ರವೀಶ್, ಇಸ್ಮಾಯಿಲ್,ಪ್ರೊ.ತಿಪ್ಪೇಸ್ವಾಮಿ, ಗುರುಪ್ರಸಾದ್, ಅರುಣ್‌ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಚಂದ್ರಮೌಳೀಶ್ವರ ದೇಗುಲದಲ್ಲಿಂದು ದೀಪಾರಾಧನೆ

ತುಮಕೂರು ತುಮಕೂರಿನ ಕ್ಯಾತಸಂದ್ರದ ಶ್ರೀ ಚಂದ್ರಮೌಳೀಶ್ವರ ಸ್ವಾಮಿ ದೇವಾಲಯದಲ್ಲಿ ಕಾರ್ತೀಕ ದೀಪೋತ್ಸವದ ಅಂಗವಾಗಿ ಡಿಸೆಂಬರ್ 1 ರ ಭಾನುವಾರ ಬೆಳಗ್ಗೆ 9 ಕ್ಕೆ ನವಗ್ರಹ, ಮೃತ್ಯುಂಜಯ ಹೋಮ, ರುದ್ರಾಭಿಷೇಕ, ಮಹಾಮಂಗಳಾರತಿ ಹಾಗೂ ಸಂಜೆ 7 ಗಂಟೆಗೆ ಶ್ರೀಚಕ್ರಪೂಜೆ, ದೀಪಾರಾಧನೆ, ಮಹಾಮಂಗಳಾರತಿ ನೆರವೇರಲಿದೆ ಎಂದು ದೇಗುಲದ ಧರ್ಮದರ್ಶಿ ಕೆ.ವೈ.ಲಕ್ಷ್ಮೀನರಸಿಂಹಶಾಸ್ತ್ರಿ ಅವರು ತಿಳಿಸಿದ್ದಾರೆ.

ಕಾಡಿದ್ದರೆ ನಾಡು

